ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/03/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು – 560001
ದಿನಾಂಕ:30-08-2024.

**ಸುತ್ತೋಲೆ**

ವಿಷಯ: ನವೆಂಬರ್- 2024ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷಾ ಕಾರ್ಯಗಳಿಗೆ ಮೌಲ್ಯಮಾಪಕರ/ಪರೀಕ್ಷಕರ ಪಟ್ಟಿಯನ್ನು ಇಂದೀಕರಿಸುವ ಬಗ್ಗೆ.

ಉಲ್ಲೇಖ: 1.ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/03/ಇಸಿಎಸ್(1)/2024,ದಿ:22-08-2024.
2.ಸರ್ಕಾರದ ಆದೇಶ ಸಂಖ್ಯೆ: ಇಡಿ 57 ಟಿಪಿಇ 2010,ದಿ:17-04-2015.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನವೆಂಬರ್-2024ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷಾ ಕಾರ್ಯಗಳಿಗೆ ಪಾಲಿಟೆಕ್ನಿಕ್ ಸಂಸ್ಥೆಗಳು BTELinx ವೆಬ್‌ಪೋರ್ಟಲ್ ಮೂಲಕ ಮೌಲ್ಯಮಾಪಕರ/ಪರೀಕ್ಷಕರ ಪಟ್ಟಿಯನ್ನು ಮತ್ತು ಪ್ರಾಂಶುಪಾಲರ ** ಹೆಸರು, ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆ: ಹಾಗೂ ಇ-ಮೇಲ್ ವಿಳಾಸಗಳನ್ನು BTELinx ವೆಬ್‌ಪೋರ್ಟಲ್‌ನಲ್ಲಿನ Staff List ನಲ್ಲಿ ಕಡ್ಡಾಯವಾಗಿ ಅಪ್ ಡೇಟ್ ಮಾಡಲು ಉಲ್ಲೇಖ(1)ರ ಜ್ಞಾಪನದಲ್ಲಿ ಸೂಚಿಸಲಾಗಿತ್ತು.

ಆದಾಗ್ಯೂ, ಕೆಲವೊಂದು ಸಂಸ್ಥೆಗಳು ಈ ವಿಷಯದಲ್ಲಿ ಕ್ರಮಕೈಗೊಳ್ಳದಿರುವುದು ಕಂಡುಬಂದಿರುತ್ತದೆ. ಕೂಡಲೇ ಮೌಲ್ಯಮಾಪಕರ/ಪರೀಕ್ಷಕರ ಪಟ್ಟಿ ಮತ್ತು ಚಾಲ್ತಿಯಲ್ಲಿರುವ ಪ್ರಾಂಶುಪಾಲರ ** ಹೆಸರು, ಮೊಬೈಲ್ ಸಂಖ್ಯೆ: ಹಾಗೂ ಇ-ಮೇಲ್ ವಿಳಾಸಗಳನ್ನು BTELinx ವೆಬ್ ಪೋರ್ಟಲ್‌ನಲ್ಲಿ ದಿ:31-08-2024ರ ಮಧ್ಯಾಹ್ನ 3.00 ಗಂಟೆಯೊಳಗೆ ಅಪ್ ಡೇಟ್ ಮಾಡಲು ಸೂಚಿಸಲಾಗಿದೆ. ತಪ್ಪಿದ್ದಲ್ಲಿ ಉಲ್ಲೇಖ(2)ರ ಸರ್ಕಾರಿ ಆದೇಶದನ್ವಯ ದಂಡ ವಿಧಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

** 1.Click Setup->Settings->Edit my profile

2. Click Setup ->My institute details->Institution details

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ
ಬೆಂಗಳೂರು

ಇವರಿಗೆ,

ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಪ್ರಾಚಾರ್ಯರುಗಳಿಗೆ – ಮುಂದಿನ ಕ್ರಮಕ್ಕಾಗಿ

ಪ್ರತಿ:

1. ಇ-ಆಡಳಿತ ವೆಬ್ ಸೈಟ್ ನಲ್ಲಿ ಪ್ರಕಟಿಸಲು
2. ಶ್ರೀ ಹರೀಶ ಶೆಟ್ಟಿ, ಪ್ರಿನ್ಸಿಪಾಲರು, ಕರ್ನಾಟಕ(ಸರ್ಕಾರಿ)ಪಾಲಿಟೆಕ್ನಿಕ್, ಮಂಗಳೂರು-ಮಾಹಿತಿಗಾಗಿ